**ಕರ್ನಾಟಕ ಸರ್ಕಾರ**
**(ತಾಂತ್ರಿಕ ಶಿಕ್ಷಣ ಇಲಾಖೆ)**

ಸಂಖ್ಯೆ: ಸಿಟಿಇ 04 ಡಿವಿಪಿ(1) 2025.

ಆಯುಕ್ತರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ 25.04.2025

**<u>ಪರಿಚಲನಾ ಆದೇಶ</u>**

ಸರ್ಕಾರದ ಆದೇಶ ಸಂಖ್ಯೆ ಇಡಿ 33 ಹೆಚ್‌ಪಿಟಿ 2022 ದಿನಾಂಕ:14.07.2022 ರ ಆದೇಶಕ್ಕೆ ಸೇರ್ಪಡೆ ಆದೇಶ ಹೊರಡಿಸಿದ್ದು, ಸದರಿ ಆದೇಶವನ್ನು ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ**.
ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 33 ಹೆಚ್‌ಪಿಟಿ 2022.

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 06.12.2024.

## ಸೇರ್ಪಡೆ ಆದೇಶ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಡಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ ವಿದ್ಯಾರ್ಥಿಗಳಿಂದ ಶುಲ್ಕಗಳನ್ನು ಸಂಗ್ರಹಿಸಲು ಹಾಗೂ ಸದರಿ ಶುಲ್ಕಗಳನ್ನು ಆಯಾ ಕಾಲೇಜುಗಳಲ್ಲಿಯೇ ಉಳಿಸಿಕೊಂಡು ಸಂಸ್ಥೆಗಳ ಅಭಿವೃದ್ಧಿಗಾಗಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅನುಮೋದನೆಯೊಂದಿಗೆ ವೆಚ್ಚಗೊಳಿಸಲು ಅನುಮತಿ ನೀಡಿ ಆದೇಶಿಸಿರುವ ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಹೆಚ್‌ಪಿಟಿ 2022, ದಿನಾಂಕ: 14.07.2022ರಲ್ಲಿನ ಆದೇಶದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಶುಲ್ಕಗಳಲ್ಲಿ ಉಳಿಸಿಕೊಂಡಿರುವ ಮೊತ್ತದಲ್ಲಿ ಕಾಲೇಜಿನ ವಿದ್ಯುತ್ ಬಿಲ್ ಮತ್ತು ನೀರಿನ ಬಿಲ್‌ನ ಮೊತ್ತವನ್ನು ಪಾವತಿಸಲು ಅನುಮತಿ ನೀಡಲಾಗಿದೆ ಎಂದು ಸೇರ್ಪಡೆಗೊಳಿಸಿ ಓದಿಕೊಳ್ಳುವಂತೆ ಈ ಮೂಲಕ ಆದೇಶಿಸಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಹೆಚ್‌ಪಿಟಿ 2022, ದಿನಾಂಕ: 14.07.2022 ಮತ್ತು ತಿದ್ದುಪಡಿ/ಸೇರ್ಪಡೆ ಆದೇಶದ ದಿನಾಂಕ: 03.04.2023ರಲ್ಲಿನ ಆದೇಶವು ಯಥಾವತ್ತಾಗಿ ಮುಂದುವರೆಯುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆ (ವೆಚ್ಚ-8) ಟಿಪ್ಪಣಿ ಸಂಖ್ಯೆ: ಆಇ 498 ವೆಚ್ಚ-8/2024 ದಿನಾಂಕ: 29.07.2024ರಲ್ಲಿ ನೀಡಿದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಎನ್. ಕುಮಾರ್ 06/12/2024
(ಎನ್.ಕುಮಾರ್)
ಸರ್ಕಾರದ ಉಪ ಕಾರ್ಯದರ್ಶಿ,
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)
ಉನ್ನತ ಶಿಕ್ಷಣ ಇಲಾಖೆ.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತ
ಆಪ್ತ ಶಾಖೆ.
ಸಂಖ್ಯೆ.............................
ದಿನಾಂಕ 07 DEC 2024

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2), ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.